# ಮಹಾ ಗೃಹ ಸಚಿವ ಅನಿಲ್ ರಾಜೀನಾಮೆ

ಮುಂಬೈ: ಭ್ರಷ್ಟಾಚಾರದ ಆರೋಪ ಹೊತ್ತಿರುವ ಮಹಾರಾಷ್ಟ್ರ ಗೃಹ ಸಚಿವ ಅನಿಲ್ ದೇಶ್‌ಮುಖ್ ದಿಢೀರ್ ಬೆಳವಣಿಗೆಯಲ್ಲಿ ಸೋಮವಾರ ರಾಜೀನಾಮೆ ನೀಡಿದ್ದಾರೆ. ಮುಂಬೈನ ಮಾಜಿ



ಪೊಲೀಸ್ ಆಯುಕ್ತ ಪರಂಬೀರ್ ಸಿಂಗ್ ಹೊರಿಸಿದ್ದ ಭ್ರಷ್ಟಾಚಾರ ಆರೋಪಕ್ಕೆ ಸಂಬಂಧಿಸಿ ಸಿಬಿಐ ತನಿಖೆಗೆ ಬಾಂಬೆ ಹೈಕೋರ್ಟ್ ಆದೇಶ ಹೊರಡಿಸಿದ ಬೆನ್ನಲ್ಲೇ ನೈತಿಕ ಹೊಣೆಹೊತ್ತು ರಾಜೀನಾಮೆ ನೀಡುತ್ತಿರುವುದಾಗಿ ದೇಶ್‌ಮುಖ್ ಘೋಷಿಸಿದ್ದಾರೆ.

'ಉದ್ಯಮಿ ಮುಕೇಶ್ ಅಂಬಾನಿ ಮನೆ ಸಮೀಪ ಸ್ಫೋಟಕ ಪತ್ತೆ ಪ್ರಕರಣದಲ್ಲಿ ಬಂಧಿತರಾಗಿರುವ ಸಹಾಯಕ ಪೊಲೀಸ್ ಇನ್‌ಸ್ಪೆಕ್ಟರ್ ಸಚಿವ್ ವಾಜೆ ಅವರಿಗೆ ಮುಂಬೈನ ಬಾರ್-ರೆಸ್ಟೋರೆಂಟ್‌ಗಳಿಂದ ಪ್ರತಿ ತಿಂಗಳು 100 ಕೋಟಿ ರೂ. ವಸೂಲು ಮಾಡಿಕೊಡುವಂತೆ ಸಚಿವ ದೇಶ್‌ಮುಖ್ ಸೂಚಿಸಿದ್ದರು' ಎಂದು ಪರಂಬೀರ್ ಸಿಂಗ್ ಆರೋಪಿಸಿದ್ದರು. ಜತೆಗೆ, ಈ ಬಗ್ಗೆ ಸಿಬಿಐ ತನಿಖೆಗೆ ಒತ್ತಾಯಿಸಿ ಕೋರ್ಟ್ ಮೊರೆಹೋಗಿದ್ದರು. ಈ ಹಿನ್ನೆಲೆ ಆದೇಶ ನೀಡಿದ ಬಾಂಬೆ ಹೈಕೋರ್ಟ್, 15 ದಿನಗಳೊಳಗೆ ಪ್ರಾಥಮಿಕ ವಿಚಾರಣೆ ಮುಕ್ತಾಯಗೊಳಿಸುವಂತೆ ಸಿಬಿಐಗೆ ಸೂಚಿಸಿದೆ. ಕೋರ್ಟ್ ಆದೇಶ ಹೊರಬೀಳುತ್ತಿದ್ದಂತೆ ದೇಶ್‌ಮುಖ್ ರಾಜೀನಾಮೆ ನೀಡಿದ್ದಾರೆ. ಜತೆಗೆ, ತಮ್ಮ ವಿರುದ್ಧ ಸಿಬಿಐ ತನಿಖೆಗೆ ಆದೇಶಿಸಿರುವುದನ್ನು ಪ್ರಶ್ನಿಸಿ ಸುಪ್ರೀಂ ಮೆಟ್ಟಿಲೇರಲು ದೇಶ್‌ಮುಖ್ ನಿರ್ಧರಿಸಿದ್ದಾರೆ.